





# ಮಂಗಳೂರು ಬಾಲಕಾಶ್ರಮದಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆ

೨೦೨೧ರ ಫೆಬ್ರವರಿ ೨೮ರಂದು ರಾಷ್ಟ್ರೀಯ ವಿಜ್ಞಾನ ದಿನಾಚರಣೆಯ ಪ್ರಯುಕ್ತ ಮಂಗಳೂರಿನ ರಾಮಕೃಷ್ಣ ಮಿಷನ್ ಬಾಲಕಾಶ್ರಮದ ಮಕ್ಕಳಿಂದ **'ವಿಜ್ಞಾನ ವಿಸ್ಮಯ'** ಎಂಬ ವಿಜ್ಞಾನ ಮಾದರಿ ಪ್ರದರ್ಶನದ ಕಾರ್ಯಕ್ರಮ ಆಚರಿಸಲಾಯಿತು. ಮಂಗಳೂರಿನ ರಾಮಕೃಷ್ಣ ಮಠದ ಅಧ್ಯಕ್ಷರಾದ ಪೂಜ್ಯ ಸ್ವಾಮಿ ಜಿತಕಾಮಾನಂದಜಿ ಮಹಾರಾಜರು ಈ ಕಾರ್ಯಕ್ರಮದ ಉದ್ಘಾಟನೆಯನ್ನು ಮಾಡಿದರು. ಕಾಸಿಯಾ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಎವರೆಸ್ಟ್ ಕ್ರಾಸ್ತಾ ಹಾಗೂ ವಿಜ್ಞಾನ ಮಾದರಿ ಪ್ರದರ್ಶನದ ರೂವಾರಿ ಮತ್ತು ಬಾಲಕಾಶ್ರಮದ ವಾರ್ಡನ್ ಆಗಿರುವ ಸ್ವಾಮಿ ರಘುರಾಮಾನಂದಜಿ ಉಪಸ್ಥಿತರಿದ್ದರು.

ಸರ್ ಸಿ.ವಿ. ರಾಮನ್ ಹಾಗೂ ಸ್ವಾಮಿ ವಿವೇಕಾನಂದರ ಗೌರವಾರ್ಥವಾಗಿ ಈ ವಿಜ್ಞಾನ ಮಾದರಿ ಪ್ರದರ್ಶನವನ್ನು ಸಮರ್ಪಿಸಲಾಯಿತು. ಬಾಲಕಾಶ್ರಮದ ವಿದ್ಯಾರ್ಥಿಗಳು ವಿಜ್ಞಾನದ ವಿವಿಧ ಪ್ರಯೋಗಗಳನ್ನು ಪ್ರಸ್ತುತ ಪಡಿಸಿದರು. Water Density, Transpiration, Rover, Kaleido scope, Hydraulic JCB, Capillary Action, Vaccum Cleaner, Magnetic Train, Electromagnetic Induction, Demonstration of Space-Time Curve, Litmus Paper Test, Conductors and Insulators, Total Internal Reflection ಹೀಗೆ ಸುಮಾರು ೩೨ ಪ್ರಯೋಗಗಳಿದ್ದವು. ಆಶ್ರಮದ ಭಕ್ತರು, ಬಾಲಕಾಶ್ರಮದ ಹಳೆಯ ವಿದ್ಯಾರ್ಥಿ ಸಂಘದ ಸದಸ್ಯರು ಭೇಟಿ ನೀಡಿ ಬಾಲಕರನ್ನು ಪ್ರೋತ್ಸಾಹಿಸಿದರು. ಸುತ್ತಮುತ್ತಲಿನ ಶಾಲೆಯ ಮಕ್ಕಳು ಭೇಟಿ ನೀಡಿ ಹೆಚ್ಚಿನ ವಿಷಯಗಳನ್ನು ತಿಳಿದುಕೊಂಡರು. ದಕ್ಷಿಣ ಕನ್ನಡದ ಜಿಲ್ಲಾ ನ್ಯಾಯಾಧೀಶರು ಎಲ್ಲಾ ಪ್ರಯೋಗಗಳನ್ನು ಗಮನಿಸಿ, ಮಕ್ಕಳ ಪ್ರತಿಭೆಯನ್ನು ಪ್ರಶಂಸಿಸಿದರು. ಬಿ.ಇ.ಓ ಕಛೇರಿಯ ಮಹಿಳಾಧಿಕಾರಿಗಳೂ ಮಕ್ಕಳ ತೀಕ್ಷ್ಣ ಬುದ್ಧಿಯನ್ನು ಕಂಡು ಸಂತೋಷ ವ್ಯಕ್ತಪಡಿಸಿದರು. ಹೀಗೆ ರಾಷ್ಟ್ರೀಯ ವಿಜ್ಞಾನ ದಿನಾಚರಣೆಯು ಯಶಸ್ವಿಯಾಗಿ ನೆರವೇರಿತು.





ಮಂಗಳೂರು ರಾಮಕೃಷ್ಣ ಮಿಷನ್ ಬಾಲಕಾಶ್ರಮದ ವಾರ್ಷಿಕ ಪತ್ರಿಕೆ **'ಯಶಸ್ವೀ ಭವ'** ದ ಮೊದಲ ಸಂಚಿಕೆಯ ಬಿಡುಗಡೆಯು ೨೦೨೧ರ ಏಪ್ರಿಲ್ ೪ರಂದು ನೆರವೇರಿತು. ಮಂಗಳೂರು ರಾಮಕೃಷ್ಣ ಮಠ ಮತ್ತು ಮಿಷನ್ನಿನ ಅಧ್ಯಕ್ಷರಾದ ಪೂಜ್ಯ ಸ್ವಾಮಿ ಜಿತಕಾಮಾನಂದಜಿಯವರು ಪತ್ರಿಕೆಯನ್ನು ಬಿಡುಗಡೆ ಮಾಡಿದರು. ಬಾಲಕಾಶ್ರಮದ ವಾರ್ಡನ್ ಸ್ವಾಮಿ ರಘುರಾಮಾನಂದಜಿ ಹಾಗೂ ನಿವೃತ್ತ ಪ್ರಾಧ್ಯಾಪಕರಾದ ಶ್ರೀ ಹೆಚ್. ಎಸ್. ಶ್ರೀರಾಮ ಕೃಷ್ಣ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

Managing Editor : Swami Muktidananda Editor : Swami Jnanayogananda
Printed and Published by Swami Muktidananda, on behalf of Sri Ramakrishna Ashrama, Yadavagiri, Mysore and Printed at Mayur Graphics, No.C-12, Industrial Estate, Rajaji Nagar, Bangalore -560 010 and published at Sri Ramakrishna Ashrama, Yadavagiri, Mysore -570 020